ಬೆಳ್ತಂಗಡಿ ತಾಲ್ಲೂಕಿನ ಪ್ರಾಥಮಿಕ ಶಾಲೆಗಳು

740(802) ಶ್ರೀ ಪ್ರಭಾಕರ ಬಂಗೇರ.ಕೆ. (ಬೆಳ್ತಂಗಡಿ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು?

ಆ) ಈ ಶಾಲೆಗಳಿಗೆ ಕೊಠಡಿ ಪರಿಕರಗಳು, ಸಿಬ್ಬಂದಿ ವರ್ಗದವರನ್ನು ಸೂಕ್ತ ರೀತಿಯಲ್ಲಿ ವ್ಯವಸ್ಥೆಗೊಳಿಸಲಾಗಿದೆಯೇ?

ಇ) ತಾಲ್ಲೂಕಿನಲ್ಲಿ ಎಷ್ಟು ಶಾಲೆಗಳಿಗೆ ಕಂಪ್ಯೂಟರ್ ಶಿಕ್ಷಣ ಒದಗಿಸಲು ಕ್ರಮ ಜರುಗಿಸಲಾಗಿದೆ;

ಈ) ಶ್ರೀ ಕ್ಷೇತ್ರ ಧರ್ಮಸ್ಥಳದವರು ಪ್ರಾಥಮಿಕ ಶಾಲಾ ಹಂತದಲ್ಲಿ ಅಳವಡಿಸಿಕೊಂಡಿರುವ ನೈತಿಕ ಶಿಕ್ಷಣ ಯೋಗ್ಯ ಸಂಸ್ಕೃತಿ ಮುಂತಾದವುಗಳನ್ನು ಸರ್ಕಾರಿ ಶಾಲೆಗಳಲ್ಲಿ ಯೂ ಅಳವಡಿಸಲು ಸರ್ಕಾರವು ಮುಂದಾಗುವುದೇ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಶಾಲೆಗಳ ಸಂಖ್ಯೆ:

1) ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು	63
2) ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು	109
ಒಟ್ಟು	**172**

ಆ) ಹೌದು

ಇ) ಈತಾಲ್ಲೂಕಿನಲ್ಲಿ 5 ಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣವನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗಿದೆ.

ಈ) ಇಲ್ಲ.

ಗ್ರಾಮ ಪಂಚಾಯತ್ ಕೇಂದ್ರ ಸ್ಥಾನದಲ್ಲಿ ಗ್ರಂಥಾಲಯಗಳ ಸ್ಥಾಪನೆ

741(956) ಶ್ರೀ ಜೆ. ಟಿ. ಪಾಟೀಲ್ (ಬೀಳಗಿ): ಮಾನ್ಯ ವಯಸ್ಕರ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಗ್ರಂಥಾಲಯಗಳನ್ನು ಪ್ರಾರಂಭಿಸಲು ಗ್ರಾಮ ಪಂಚಾಯತ್ ಕೇಂದ್ರ ಸ್ಥಾನವನ್ನು ಹೊಂದಿದ ಹಳ್ಳಿಗಳಷ್ಟೇ ನೇಮಿತಗೊಳಿಸಿರುವುದು ಅನ್ಯಾಯವಲ್ಲವೇ?

ಆ) ಹಾಗಾದರೆ ಪಂಚಾಯತ್ ಕೇಂದ್ರ ಸ್ಥಾನವನ್ನುಹೊಂದದೇ ಇರುವ ಹಳ್ಳಿಗಳ ಜನರು ಸರ್ಕಾರಿ ಗ್ರಂಥಾಲಯಗಳನ್ನು ಪಡೆದುಕೊಳ್ಳುವುದರಿಂದ ವಂಚಿತರಾದರೆ ಆಗುವುದಿಲ್ಲವೇ?

ಇ) ಆವಶ್ಯಕತೆ ಇರುವ ಎಲ್ಲಾ ಗ್ರಾಮಗಳಿಗೂ ಗ್ರಂಥಾಲಯಗಳನ್ನು ಪ್ರಾರಂಭಿಸಲು ಸರ್ಕಾರ ತೀರ್ಮಾನವನ್ನು ಪುನರ್ ಪರಿಶೀಲಿಸಲಾಗುವುದೇ; ವಿವರಣೆ ಕೊಡಬೇಕು?